ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಸರ್ಕಾರಿ ಆಸ್ಪತ್ರೆಗಳಲ್ಲಿ 24 ಗಂಟೆಯ ಮರಣೋತ್ತರ ಪರೀಕ್ಷೆ ಮಾಡುವ ಬಗ್ಗೆ

ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-

1487 (1768) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೆಚ್ಚಾಗಿ ಜನರು ವಾಸಿಸುವ ನಗರ ಪ್ರದೇಶಗಳಲ್ಲಿ ಮರಣೋತ್ತರ ಪರೀಕ್ಷೆ (Post Mortem) ವಿಧಾನಕ್ಕೆ ಹೆಚ್ಚಿನ ಸಮಯವು ತೆಗೆದುಕೊಳ್ಳುವುದರಿಂದ ಈ ವ್ಯವಸ್ಥೆಯನ್ನು ನಿರ್ವಹಿಸುವ ವಿಭಾಗಗಳು 24 ಗಂಟೆಗಳ ಕಾಲ ಕೆಲಸ ನಿರ್ವಹಿಸುತ್ತಿವೆಯೇ ;

(ಆ) ರಾಜ್ಯದ ಕೆಲವೊಂದು ಆಸ್ಪತ್ರೆಗಳಲ್ಲಿ ಸೀಮಿತ ಅವಧಿಗೆ ಮಾತ್ರ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ನೊಂದ ಜನರು ದಯನೀಯ ಪರಿಸ್ಥಿತಿಯಲ್ಲಿರುವುದು ಸರ್ಕಾರದ ಗಮನದಲ್ಲಿದೆಯೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರದ ಕ್ರಮಗಳೇನು ;

(ಇ) ಮರಣೋತ್ತರ ಪರೀಕ್ಷೆ (Post Mortem) ಯಂತಹ ಆತಂಕ ಮತ್ತು ದುಃಖಕರ ಪರಿಸ್ಥಿತಿಯಲ್ಲಿ ಸಂಬಂಧಿಕರು ಕಾಯುವುದನ್ನು ತಪ್ಪಿಸಲು ದಿನದ 24 ಗಂಟೆಯು ಕಾರ್ಯನಿರ್ವಹಿಸುವ ಬಗ್ಗೆ ಸರ್ಕಾರದ ಕ್ರಮಗಳೇನು ?